KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-171
ಮಂಗಳವಾರ 13 ಮೇ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ತುಮಕೂರು ತಾಲ್ಲೂಕು ದೇವರಾಯನದುರ್ಗದಲ್ಲಿ ಶ್ರೀ ನರಸಿಂಹ ಸ್ವಾಮಿ ಜಯಂತಿ ಪ್ರಯುಕ್ತ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿಗೆ ವಿಶೇಷವಾಗಿ ಹೂವಿನ ಅಲಂಕಾರವನ್ನು ಏರ್ಪಡಿಸಲಾಗಿತ್ತು. ಹಾಗೂ ಮುಖ್ಯ ಬೀದಿಗಳಲ್ಲಿ ಚಿಕ್ಕ ರಥದಲ್ಲಿ ಸ್ವಾಮಿಯ ಉತ್ಸವವು ಬಹಳ ವಿಜೃಂಬಣೆಯಿಂದ ನಡೆಯಿತು ಹಾಗೂ ನರಸಿಂಹ ಜಯಂತಿ ಪ್ರಯುಕ್ತ ಸಹಕಾರ ಸಚಿವರಾದ ಕೆ.ಎನ್ ರಾಜಣ್ಣ ರವರು ಸ್ವಾಮಿಯ ದರ್ಶನವನ್ನು ಪಡೆದರು ಮತ್ತು ಕಾರ್ಯ ನಿರ್ವಾಣಾದಿಕಾರಿ ಎಸ್.ಟಿ ಸುನೀಲ್ ಕುಮಾರ್. ವ್ಯವಸ್ಥಾಪನ ಸಮಿತಿ ಅದ್ಯಕ್ಷ ಕರಿಗಿರಿಯಪ್ಪ ಎಸ್.ಮೂರ್ತಿ ಹಾಗೂ ಸಾವಿರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಬಾಗವಹಿಸಿದ್ದರು

## ದೇಶ ಸೇವೆಗೆ ಯುವ ಜನತೆ ಮುಂದಾಗಿ



ಹುಳಿಯಾರು: ಹುಳಿಯಾರು-ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕದಿಂದ 2024-25 ನೇ ಸಾಲಿನ ವಿಶೇಷ ವಾರ್ಷಿಕ ಶಿಬಿರವನ್ನು ಬೆಳಗುಲಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ.

ಶಾಸಕ ಸಿ.ಬಿ.ಸುರೇಶ್‌ಬಾಬು ಉದ್ಘಾಟಿಸಿ ಮಾತನಾಡಿ ಎನ್‌ಎಸ್‌ಎಸ್ ಶಿಬಿರದಲ್ಲಿ ನಾಯಕತ್ವ ಗುಣ, ಸೇವಾ ಮನೋಬಾವ ಬೆಳಸಿಕೊಂಡು ದೇಶ ಸೇವೆಗೆ ಯುವ ಜನತೆ ಮುಂದಾಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಪ್ರೊ.ಎಸ್.ಸಿ.ವೀರಣ್ಣ ಅವರು ಮಾತನಾಡಿ ಪರಿಸರ ಸಂರಕ್ಷಣೆ, ಸ್ವಚ್ಚ ಗ್ರಾಮ ನಿರ್ಮಾಣ, ಜಲ ಸಂರಕ್ಷಣೆ, ಸ್ವ-ಉದ್ಯೋಗ ಹಾಗೂ ಆರೋಗ್ಯದ ಬಗ್ಗೆ ಶಿಬಿರದಲ್ಲಿ ಒತ್ತು ನೀಡಲಾಗಿದೆ ಎಂದರು. ಶಿಬಿರಾಧಿಕಾರಿಗಳಾದ ಲಕ್ಷ್ಮೀ ಎಸ್. ಎಸ್.ರಮೇಶ್, ಸುಮಯ್ಯ, ಎಂ.ಕೆ.ತಿಪ್ಪೇಸ್ವಾಮಿ, ಸಿಡಿಸಿ ಸದಸ್ಯರುಗಳಾದ ಸೈಯದ್ ಜಹೀರ್, ರಾಘವೇಂದ್ರ ಭಾಗವಹಿಸಿದ್ದರು.

## ಮುಂಜಾಗ್ರತೆ ವಿಪತ್ತು ನಿರ್ವಹಣೆ: ಮಧುಗಿರಿ ತಾಲೂಕು ಆಡಳಿತ ಸಜ್ಜು

ಮಧುಗಿರಿ: ಭಾರತ ಮತ್ತು ಪಾಕ್ ನಡುವೆ ನಡೆಯುತ್ತಿರುವ ಯುದ್ಧದ ಸಂದರ್ಭದಲ್ಲಿ ತಾಲೂಕಿನಲ್ಲಿ ವಿಪತ್ತು ನಿರ್ವಹಣ ಮಾಡಲು ಮುಂಜಾಗ್ರತಾ ಕ್ರಮಕ್ಕಾಗಿ ತಾಲೂಕು ಆಡಳಿತ ಸಜ್ಜಾಗಿದೆ ಎಂದು ತಹಶೀಲ್ದಾರ್ ಶಿರೀನ್ ತಾಜ್ ತಿಳಿಸಿದ್ದಾರೆ.

ತಹಶೀಲ್ದಾರ್ ಕಾರ್ಯಾಲಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿ ತಾಲೂಕು ಕಚೇರಿಯಲ್ಲಿ ಸಹಾಯವಾಣಿ ಕೇಂದ್ರವನ್ನು ತೆರೆದಿದ್ದು ದೂರವಾಣಿ ಸಂಖ್ಯೆ 08137 200924 ದೂರವಾಣಿ ಸಂಖ್ಯೆ ಸಂಪರ್ಕಿಸಲು ಸಾರ್ವಜನಿಕರಿಗೆ ಕೋರಲಾಗಿದೆ ಇದೆ ಅಲ್ಲದೆ ಯಾವುದೇ ಸಮಸ್ಯೆಗಳನ್ನು ಎದುರಿಸಲು ತಾಲೂಕಾ ಆಡಳಿತ ಸಾರ್ವಜನಿಕ ಆಸ್ಪತ್ರೆಯ 100 ಹಾಸಿಗೆ ಬೆಡ್ ಐಸಿಯು ಬೆಡ್ ಐದು ಮಕ್ಕಳ ನಿಗ ಘಟಕ 14 ವೆಂಟಿಲೇಟರ್ 7 ಆಂಬುಲೆನ್ಸ್ 3 108 ಆಂಬುಲೆನ್ಸ್ 3 ಪ್ರಾಥಮಿಕ ಆರೋಗ್ಯ ಕೇಂದ್ರ ಹದಿಮೂರು ತಾಲೂಕು ಆಸ್ಪತ್ರೆಯ ವಿಸ್ತರಣಾ ಘಟಕ 4 ನಮ್ಮ ಕ್ಲಿನಿಕ್ 2 ಇವುಗಳನ್ನು ಎಲ್ಲಾ ರೀತಿಯಲ್ಲೇ ಸಜ್ಜುಗೊಳಿಸಲಾಗಿದೆ ಅಧಿಕಾರಿಗಳು ರಜೆ ಮೇಲೆ ಇದ್ದಲ್ಲಿ ರಜಾವನ್ನು ಮಟಕುಗಳಿಸಿ ಕರ್ತವ್ಯಕ್ಕೆ ಹಾಜರಾಗಲು ಮತ್ತು ಕೇಂದ್ರ ಸ್ಥಾನದಲ್ಲಿರಲು ಸೂಚನೆ ನೀಡಲಾಗಿದೆ.

ಜನಸಂದಣಿ ಪ್ರದೇಶವಾದ ದೇವಸ್ಥಾನ ಬಸ್ ನಿಲ್ದಾಣಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ ಆಹಾರದ ಕೊರತೆ ಉಂಟಾಗದಂತೆ ಕೃತಕ ಅಭಾವ ಸೃಷ್ಟಿಯಾಗದಂತೆ ಎಚ್ಚರಿಕೆ ವಹಿಸಲಾಗಿದೆ ಇದೆ ಅಲ್ಲದೆ ವಿದ್ಯಾರ್ಥಿ ನಿಲಯ ಸಮುದಾಯ ಭವನಗಳನ್ನು ತಾಲೂಕು ಆಡಳಿತ ತನ್ನ ವಶಕ್ಕೆ ತೆಗೆದುಕೊಳ್ಳಲಿದೆ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಸೈರನ್ ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ ತುರ್ತು ಸಂದರ್ಭದಲ್ಲಿ ಎನ್ ಸಿ ಸಿ ವಿದ್ಯಾರ್ಥಿಗಳು ಮತ್ತು ಇಚ್ಚೆಯುಳ್ಳ ಸಾರ್ವಜನಿಕರನ್ನು ಬಳಸಿಕೊಳ್ಳಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.



ತುಮಕೂರು ಜಿಲ್ಲೆಗೆ ಹೊಸದಾಗಿ ಪೊಲೀಸ್ ಇಲಾಖೆಗೆ ಆಡಿಷನಲ್ ಸೂಪರಿಂಟೆಂಡೆಂಟ್ ನಿಯೋಜನೆಗೊಂಡಿರುವ ಪುರುಷೋತ್ತಮ್ ಅವರನ್ನು ಬಿಜೆಪಿ ಅಸಂಘಟಿತ ಕಾರ್ಮಿಕ ಪ್ರಕೋಷ್ಟದ ಸಂಚಾಲಕ ಪ್ರಕಾಶ್ ಭಾರದ್ವಾಜ್, ಜಿಲ್ಲಾ ಸದಸ್ಯರಾದ ಶ್ರೀಮತಿ ಕೋಮಲ ವೀರಭದ್ರಯ್ಯ, ನಳಿನ. ಮಂಜುಳ, ಅವರುಗಳು ಸ್ವಾಗತಿಸಿ ಸನ್ಮಾನಿಸಿದರು

## ಬುದ್ಧರ ತತ್ವ ಸಿದ್ಧಾಂತ ಅಳವಡಿಕೆಯಿಂದ ಜೀವನ ಸಾರ್ಥಕ

ತುಮಕೂರು: ಭಗವಾನ್ ಬುದ್ಧರ ತತ್ವ ಸಿದ್ಧಾಂತಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ನಮ್ಮ ಜೀವನವು ಸಾರ್ಥಕವಾಗುತ್ತದೆ ಎಂದು ರಾಜ್ಯದ ಗೃಹ ಸಚಿವರೂ ಹಾಗೂ ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಡಾ. ಜಿ ಪರಮೇಶ್ವರ್ ತಿಳಿಸಿದರು.

ನಗರದ ಹೊರವಲಯದಲ್ಲಿರುವ ಸಿದ್ಧಾರ್ಥ ನಗರದಲ್ಲಿ ಶ್ರಿ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯವತಿಯಿಂದ ಆಯೋಜಿಸಿದ್ದಂತಹ ಬುದ್ಧ ಪೌರ್ಣಮಿಯ ಕಾರ್ಯಕ್ರಮದಲ್ಲಿ ಬುದ್ಧನ ವಿಗ್ರಹಕ್ಕೆ ಪುಷ್ಪಾರ್ಚನೆಯನ್ನು ಮಾಡಿ ಮಾತನಾಡಿದ ಅವರು ಭಗವಾನ್ ಬುದ್ಧರು ಮನುಷ್ಯ ಕುಲಕ್ಕೆ ನೀಡಿದ ವಿಚಾರಗಳು, ತತ್ವ ಸಿದ್ಧಾಂತಗಳು ಸಾವಿರಾರು ವರ್ಷಗಳು ಕಳೆದರೂ ಇನ್ನೂ ಜೀವಂತವಾಗಿದೆ ಹಾಗೂ ಮುಂದೆಯೂ ಇರುತ್ತದೆ ಎಂದರೆ ಅವರ ವಿಚಾರಗಳು ಎಷ್ಟು ಮಹತ್ವದ್ದು ಎಂದು ಯೋಚಿಸಬೇಕು. ಮನುಷ್ಯ ಪ್ರತಿನಿತ್ಯ ಅನುಭವಿಸುವ ದುಃಖ ದುಮ್ಮಾನಗಳಿಗೆ, ಕಷ್ಟಗಳಿಗೆ ಮುಕ್ತಿದೊರೆಯುವ ಮಾರ್ಗವನ್ನು ಮಾನವ ಕುಲಕ್ಕೆ ತೋರಿಸಿಕೊಟ್ಟವರು ಭಗವಾನ್ ಬುದ್ಧರು. ಭಗವಾನ್ ಬುದ್ಧ ಹಾಗೂ ಅವರ ವಿಚಾರಗಳು ಯಾವಕಾಲಕ್ಕೂ ಪ್ರಸ್ತುತವೆನಿಸುತ್ತದೆ. ಇಂತಹ ವಿಚಾರಗಳನ್ನು ತತ್ವ ಸಿದ್ಧಾಂತಗಳನ್ನು ಸಾಕಷ್ಟು ರಾಷ್ಟ್ರಗಳು



ಅಳವಡಿಸಿಕೊಂಡು ಮುಂದುವರೆಯುತ್ತಿದೆ ಎಂದು ಹೇಳಿದರು.

ಸಿಬಿಐ ನ್ಯಾಯಲಯದ ನ್ಯಾಯಾಧೀಶ ರಾದ ಎಚ್ ಎ ಮೋಹನ್ ಮಾತನಾಡಿ ಮಾನವ ಕುಲಕ್ಕೆ ಶಾಂತಿಯನ್ನು ಭೋದಿಸಿದ ಮಾನವನ ಕಷ್ಟ ದುಃಖಗಳಿಗೆ ಸೂಕ್ತ ಮಾರ್ಗ ವನ್ನು ಸೂಚಿಸಿದವರು ಮಹಾನ್ ಚೇತನ ಗೌತಮ ಬುದ್ಧ. ಇವರ ತತ್ವಗಳನ್ನು ನಾವು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಸಾಹೇ ವಿವಿಯ ಉಪಕುಲಪತಿಗಳಾದ ಡಾ. ಕೆ.ಬಿ. ಲಿಂಗೇಗೌಡ ಮಾತನಾಡಿದರು. ಕಾರ್ಯ ಕ್ರಮದಲ್ಲಿ ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳಾದ ನಂಜುಂಡಪ್ಪ, ಬೀದರ್ ಬೌದ್ಧ ವಿಹಾರದ ಭಿಕ್ಷು ಪೂಜ್ಯ ಬಂತೇಜಿರವರು, ಸಾಹೇ ವಿವಿಯ ಕುಲಸಚಿವ ಡಾ. ಅಶೋಕ್ ಮೆಹತ್, ಪರಿಕ್ಷಾಂಗ ನಿಯಂತ್ರಕರಾದ ಡಾ. ಗುರುಶಂಕರ್, ಶ್ರೀ ಸಿದ್ಧಾರ್ಥ ದಂತ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರವೀಣ್ ಕುಡುವ, ಕುಲಪತಿಗಳ ಆಪ್ತ ಸಲಹೆಗಾರರಾದ ಡಾ. ವಿವೇಕ್ ವೀರಯ್ಯ, ವೈದ್ಯಕೀಯ ಅಧೀಕ್ಷಕ ಡಾ. ವೆಂಕಟೇಶ್, ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ರಾದ ಡಾ. ಎಂ.ಎಸ್ ರವಿಪ್ರಕಾಶ್ ಹಾಗೂ ಸಂಸ್ಥೆಯ ವಿವಿಧ ಕಾಲೇಜಿನ ಪ್ರಾಂಶುಪಾಲರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## 'ಜಗತ್ತಿಗೆ ಶಾಂತಿ, ಅಹಿಂಸೆ ಮಾರ್ಗ ತೋರಿಸಿಕೊಟ್ಟ ಬುದ್ಧ'

ತುಮಕೂರು: ಇಂದು ಸ್ಲಂ ಜನಾಂದೋಲನ ಕರ್ನಾಟಕ ಮತ್ತು ತುಮಕೂರು ಜಿಲ್ಲಾ ಕೊಳಗೇರಿ ನಿವಾಸಿಗಳ ಹಿತರಕ್ಷಣಾ ಸಮಿತಿ ವತಿಯಿಂದ ನಗರದ ಸ್ಲಂ ಭವನದಲ್ಲಿ 2569ನೇ ಬುದ್ಧ ಪೂರ್ಣಿಮೆ ಜಯಂತಿಯನ್ನು ಆಚರಿಸಲಾಯಿತು. ಬುದ್ಧನಿಗೆ ಪುಷ್ಪ ನಮನ ಸಲ್ಲಿಸಿ ಮಾತ ನಾಡಿದ ಸ್ಲಂ ಜನಾಂದೋಲನ ಕರ್ನಾಟಕದ ರಾಜ್ಯ ಸಂಚಾಲಕ ಎ.ನರಸಿಂಹ ಮೂರ್ತಿ ಭಾರತದ ಜನಸಂಸ್ಕೃತಿಯ ಪ್ರಖ್ಯಾತ ಮನಶಾಸ್ತ್ರಜ್ಞ ಸಿದ್ಧಾರ್ಥನೆಂಬ ಗೌತಮ ಬುದ್ಧ ಅತ್ಯಂತ ಕಡಿಮೆ ಪ್ರಮಾಣದಲ್ಲಿದ್ದ ತಂತ್ರಜ್ಞಾನದ ಬದುಕಿನಿಂದ ದೂರವಿದ್ದ ಕಾಲದಲ್ಲಿ ಮನುಷ್ಯನ ಮನಸ್ಸುಗಳ ತಲ್ಲಣಗಳಿಗೆ ಉತ್ತರ ಹುಡುಕಲು ಪ್ರಯತ್ನಿಸಿದ ಗೌತಮ ನಿಜಕ್ಕೂ ಎಲ್ಲರು ಭಾವಿಸಿರುವಂತೆ ತನ್ನ ಬದುಕಿನ ಅನುಭವದಲ್ಲಿ ಬುದ್ಧನಾಗಿ ತನ್ನ ಸಂದೇಶಗಳು ಜನರಿಗೆ ಅತ್ಯಂತ ಪರಿಣಾಮಕಾರಿ ವಾಸ್ಥವಕ್ಕೆ ಹತ್ತಿರ ಆಗುವಂತೆ ಮಾಡಿದ ಗೌತಮ ಆತನ ಚಿಂತನೆಗಳು ಮನುಷ್ಯನೇ ಮನುಷ್ಯನಿಗೆ ಶಾಂತಿ ಮತ್ತು ಅಹಿಂಸೆಯ ಮಾರ್ಗದಲ್ಲಿ ನಡೆದುಕೊಳ್ಳಲು 2500 ವರ್ಷಗಳ ಹಿಂದೆಯೇ ಪ್ರಯತ್ನಿಸಿ ಸಫಲತೆ ಕಂಡು ಇಡೀ ಜಗತ್ತಿಗೆ ವ್ಯಾಪಸುವಂತೆ ಮಾಡಿದರು ಎಂದರು.

ಈ ಸಂದರ್ಭದಲ್ಲಿ ತುಮಕೂರು ಸ್ಲಂ ಸಮಿತಿ ಪದಾಧಿಕಾರಿಗಳಾದ ಅರುಣ್, ಶಂಕರಯ್ಯ, ಕಣ್ಣನ್, ಜಾಬೀರ್‌ಖಾನ್, ಕೃಷ್ಣಮೂರ್ತಿ, ತಿರುಮಲಯ್ಯ, ಕೆಂಪಣ್ಣ, ಸಾವಿತ್ರಿ ಬಾಯಿಪುಲೆ ಮಹಿಳಾ ಸಂಘದ ಅನುಪಮಾ, ಶರದಮ್ಮ, ಶಾಂತಮ್ಮ ಮುಂತಾದವರು ಪಾಲ್ಗೊಂಡಿದ್ದರು.

## ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಲು ಬಿಜೆಪಿ ಕಾರ್ಯಕರ್ತರಿಗೆ ಜಿಲ್ಲಾಧ್ಯಕ್ಷರ ಮನವಿ

ತುಮಕೂರು: ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನ ಪರಿಸ್ಥಿತಿಯಲ್ಲಿ ಸರ್ಕಾರದ ನಿರ್ದೇಶನದಂತೆ ಜಿಲ್ಲಾಡಳಿತದಿಂದ ನಾಗರಿಕ ರಕ್ಷಣಾ ಸ್ವಯಂ ಸೇವಕರನ್ನು ನೇಮಿಸಿಕೊಳ್ಳುತ್ತಿದ್ದು, ಜಿಲ್ಲೆಯ ಬಿಜೆಪಿ ಕಾರ್ಯಕರ್ತರು ಸ್ವಯಂ ಸೇವಕರಾಗಿ ಹೆಸರು ನೊಂದಾಯಿಸಿಕೊಂಡು ಸಮಾಜ ರಕ್ಷಣೆಗೆ ಸಿದ್ಧರಾಗಬೇಕು ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್.ರವಿಶಂಕರ್ ಹೆಬ್ಬಾಕ ಮನವಿ ಮಾಡಿದ್ದಾರೆ.



ಈ ಸಂಬಂಧ ಹೇಳಿಕೆ ನೀಡಿರುವ ಅವರು, ದೇಶದ ರಕ್ಷಣೆಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಹಾಗೂ ಭಾರತೀಯ ಸೈನಿಕರು ತೆಗೆದುಕೊಳ್ಳುವ ಯಾವುದೇ ಕ್ರಮಗಳನ್ನು ಬಿಜೆಪಿ ಪೂರ್ಣ ಪ್ರಮಾಣದಲ್ಲಿ ಬೆಂಬಲಿಸಿ, ದೇಶದ ಜೊತೆ ನಿಲ್ಲುತ್ತದೆ. ಈ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಸಾಮಾಜಿಕ ಜವಾಬ್ದಾರಿ ನಿರ್ವಹಿಸಲು ಸಿದ್ಧರಿದ್ದಾರೆ. ಜಿಲ್ಲಾಡಳಿತ ನೇಮಿಸಿಕೊಳ್ಳಲಿರುವ ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ಬಿಜೆಪಿಯ ಹೆಚ್ಚಿನ ಕಾರ್ಯಕರ್ತರು ಮುಂದೆಬಂದು ಸಮಾಜ ರಕ್ಷಣಾ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದು ವಿನಂತಿಸಿದ್ದಾರೆ.

18 ವರ್ಷ ಮೇಲ್ಪಟ್ಟ, ಆರೋಗ್ಯವಂತ ಕಾರ್ಯಕರ್ತರು ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಲು ಪಕ್ಷದ ಆಯಾ ಮಂಡಲ ಅಧ್ಯಕ್ಷರು, ಮೋರ್ಚಾಗಳ ಅಧ್ಯಕ್ಷರ ಬಳಿ ದೊರೆಯುವ ಅರ್ಜಿ ಪಡೆದು ಭರ್ತಿ ಮಾಡಿ ಅವರಿಗೆ ಸಲ್ಲಿಸಿ ನಾಗರಿಕ ರಕ್ಷಣಾ ಕಾರ್ಯದಲ್ಲಿ ಸಕ್ರಿಯವಾಗಿ ಭಾಗಿಯಾಗಬೇಕು ಎಂದು ರವಿಶಂಕರ್ ಹೆಬ್ಬಾಕ ಕೋರಿದ್ದಾರೆ.

## ವಡ್ಡಗೆರೆ ವೀರನಾಗಮ್ಮ ದೇವಾಲಯ ಟ್ರಸ್ಟ್ ಅಮಾನತ್ತು

### ಕೋಟ್ಯಾಂತರ ಹಣ ಮತ್ತು ಚಿನ್ನ-ಬೆಳ್ಳಿ ಗೋಲ್‌ಮಾಲ್: ತನಿಖೆಗೆ ಆದೇಶ

ಕೊರಟಗೆರೆ: ವೀರನಾಗಮ್ಮ ದೇವಾಲಯ ಟ್ರಸ್ಟ್ ಸದಸ್ಯರಿಂದ ಬಂಗಾರ, ಬೆಳ್ಳಿ, ಅಕ್ಕಿ ಮತ್ತು ಹಣದ ವಹಿವಾಟಿನಲ್ಲಿ ಗೋಲ್‌ಮಾಲ್. ಧಾರ್ಮಿಕ ದತ್ತಿ ಇಲಾಖೆಯ ಅಧಿಕಾರಿಗಳ ಪ್ರಶ್ನೆಗಳಿಗೆ ಟ್ರಸ್ಟಿಗಳಿಂದ ಮೌನವೇ ಉತ್ತರ. ಬೆಳ್ಳಿ, ಬಂಗಾರ, ಬ್ಯಾಂಕ್ ಪುಸ್ತಕ ಮತ್ತು ದಾಖಲೆಗಳೆಲ್ಲ ಸೀಜ್. ಟ್ರಸ್ಟ್ ವಿರುದ್ಧ ಪ್ರಕರಣ ದಾಖಲಿಸಿ ತನಿಖೆಗೆ ಆದೇಶ ಮಾಡಿದ ಧಾರ್ಮಿಕದತ್ತಿ ಇಲಾಖೆ.

ಕೊರಟಗೆರೆ ತಾಲೂಕು ಕಸಬಾ ಹೋಬಳಿ ವಡ್ಡಗೆರೆಯ ಶ್ರೀವೀರನಾಗಮ್ಮ ದೇವಾಲಯದ ಕಥೆ ಇದು. ಮುಜರಾಯಿ ಇಲಾಖೆ ಆದೇಶದಂತೆ 2006ರಲ್ಲಿ ಆರಂಭ ವೀರನಾಗಮ್ಮ ದೇವಾಲಯ ಸಮಿತಿ ಕಾಲಕ್ರಮೇಣ ಟ್ರಸ್ಟ್ ಆಗಿ ಬದಲಾಗಿ 19ವರ್ಷಗಳ ದಾಖಲೆಗಳೇ ಮಾಯವಾಗಿವೆ.



ಧಾರ್ಮಿಕದತ್ತಿ ಇಲಾಖೆಯ ಅಧಿಕಾರಿಗಳು ಕೇಳುವ 20ಕ್ಕೂ ಅಧಿಕ ಪ್ರಶ್ನೆಗಳಿಗೆ ಮೌನವೇ ಉತ್ತರವಾಗಿ ಅಕ್ರಮ ನಡೆದಿರೋದು ಸಾಭಿತಾಗಿದೆ.

ವೀರನಾಗಮ್ಮ ಟ್ರಸ್ಟ್ ಮಾಹಿತಿ ಮುಜರಾಯಿ ಇಲಾಖೆಗೆ ನೀಡಿದ್ದೀರಾ. ಟ್ರಸ್ಟ್ ರಚನೆಗೆ ಎಲ್ಲಾ ವರ್ಗದ ಜನತೆ ಇರಬೇಕಾದ ಕಾನೂನು ಗೊತ್ತಿಲ್ಲವೇ. ಭಕ್ತರಿಂದ ಕಾಣಿಕೆ ರೂಪದಲ್ಲಿ ಪಡೆಯುವ ಹಣ, ಅಕ್ಕಿ, ಬಂಗಾರ, ಬೆಳ್ಳಿ, ವಸ್ತುಗಳಿಗೆ ಪ್ರತ್ಯೇಕ ರಸೀದಿ ಪುಸ್ತಕ ಏಕಿಲ್ಲ. ಬಂಗಾರ, ಬೆಳ್ಳಿ ಮತ್ತು ನಗದು ಹಣದ ಮಾಹಿತಿ ಮುಜರಾಯಿಗೆ ಏಕೆ ನೀಡಿಲ್ಲ ಎಂಬ 20ಕ್ಕೂ ಪ್ರಶ್ನೆಗಳಿಗೆ ಟ್ರಸ್ಟಿಗಳ ಬಳಿ ಉತ್ತರವೇ ನೀಡದೇ ಮೌನಕ್ಕೆ ಶರಣಾಗಿದ್ದರು.

ಧಾರ್ಮಿಕ ದತ್ತಿ ಇಲಾಖೆಯ ಕೆ.ಪದ್ಮ ನೇತೃತ್ವದಲ್ಲಿ ಕೊರಟಗೆರೆ ತಹಶೀಲ್ದಾರ್ ಮಂಜುನಾಥ, ಪಿಎಸ್ಐ ತೀರ್ಥೇಶ್ ತಂಡ ಪರಿಶೀಲನೆ ನಡೆಸಿದ ನಂತರ ಟ್ರಸ್ಟಿಗಳ ಬಳಿಯಿದ್ದ ಚಿನ್ನಾಭರಣ, ಬೆಳ್ಳಿ, ಟ್ರಸ್ಟ್ ಮತ್ತು ದೇವಾಲಯದ ದಾಖಲೆ, ಬ್ಯಾಂಕು ಪುಸ್ತಕ ಸೇರಿದಂತೆ ವಿವಿಧ ದಾಖಲೆಗಳನ್ನು ವಶಕ್ಕೆ ಪಡೆದು ಟ್ರಸ್ಟ್ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ನಡೆಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ತಹಶೀಲ್ದಾರ್‌ಗೆ ಸೂಚಿಸಿದರು.

ವೀರನಾಗಮ್ಮ ಟ್ರಸ್ಟ್ ಅಧ್ಯಕ್ಷ ರಾಜಿನಾಮೆ ;- ವಡ್ಡಗೆರೆಯ ವೀರನಾಗಮ್ಮ ದೇವಾಲಯ ಟ್ರಸ್ಟ್ಗೆ ಸೇರಿದ ಸದಸ್ಯರಾದ ವಿ.ನಾಗೇಶ್, ಶಿವಕುಮಾರ್ ಮತ್ತು ಮಾರುತೀಶ್ ಸೇರಿಕೊಂಡು ಲಕ್ಷಾಂತರ ರೂ ದುರುಪಯೋಗ ಮಾಡಿದ್ದಾರೆ. ಸಮಿತಿಯ ಲೆಕ್ಕಕ್ಕೆ ನೀಡದೇ ವಂಚನೆ ಮಾಡಿರುವ ಪರಿಣಾಮ ಮನನೊಂದು ತನ್ನ ಅಧ್ಯಕ್ಷ ಸ್ಥಾನಕ್ಕೆ ರಾಜಿನಾಮೆ ನೀಡಿದ್ದೇನೆ ಎಂದು 2025ರ ಏ.25ರಂದು ಮುಜರಾಯಿ ಇಲಾಖೆಗೆ ನೀಡಿರುವ ಪತ್ರ ಪತ್ರಿಕೆಗೆ ದೊರೆತಿದೆ.

ವೀರನಾಗಮ್ಮ ದೇವಾಲಯದ ಟ್ರಸ್ಟಿ ಶಿವಕುಮಾರ ಮಾತನಾಡಿ ದೇವಾಲಯದ ಅಭಿವೃದ್ದಿಯ ಜವಾಬ್ದಾರಿ ನಮ್ಮದೇ ಆಗಿದೆ. ಅಭಿವೃದ್ದಿಯ ಹಿತದೃಷ್ಟಿಯಿಂದ ಅಭಿವೃದ್ದಿ ಸಮಿತಿಯನ್ನೇ ಟ್ರಸ್ಟ್ ಮಾಡಿಕೊಂಡ ಹಿರಿಯರ ಆದೇಶದಂತೆ ನಾವು ಕೆಲಸ ಮಾಡಿದ್ದೀವಿ. ಮುಜರಾಯಿ ದೇವಾಲಯ ಎಂಬ ವಿಚಾರ ನಮಗೇ ಗೊತ್ತು. ಟ್ರಸ್ಟ್ನ ದಾಖಲೆ, ಬಂಗಾರ ಮತ್ತು ಬೆಳ್ಳಿ ಇಲಾಖೆಗೆ ಒಪ್ಪಿಸಿದ್ದೇವೆ. ನಮ್ಮ ದೃಷ್ಟಿಯಲ್ಲಿ ಯಾವುದೇ ಅವ್ಯವಹಾರ ಆಗಿಲ್ಲ. ತನಿಖೆ ಆಗಲಿ ನಮ್ಮದೇನು ತರ?ಯಾರು ಇಲ್ಲ.

ಧಾರ್ಮಿಕ ದತ್ತಿ ಇಲಾಖೆ ಕೇಂದ್ರ ಸ್ಥಾನಿಕ ಸಹಾಯಕಿ ಪದ್ಮಾ ತನಿಖೆಯ ನಂತರ ಮಾತನಾಡಿ ವೀರನಾಗಮ್ಮ ದೇವಾಲಯ ಟ್ರಸ್ಟ್ ಕಾನೂನು ಪ್ರಕಾರ ಯಾವ ಕೆಲಸವನ್ನು ಮಾಡಿಲ್ಲ. ಕಾಣಿಕೆಯ ಹಣದಲ್ಲಿ ಅವ್ಯವಹಾರ ಆಗಿರೋದು ಸಾಭಿತಾಗಿದೆ. ವೀರನಾಗಮ್ಮ ಟ್ರಸ್ಟ್ ಕಚೇರಿ ಸೀಜ್ ಮಾಡಿ ಬಂಗಾರ, ಬೆಳ್ಳಿ ಮತ್ತು ದಾಖಲೆ ವಶಕ್ಕೆ ಪಡೆಯಲಾಗಿದೆ. ಟ್ರಸ್ಟ್ಗೆ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ನಡೆಸಲು ಸೂಚಿಸಲಾಗಿದೆ. ದೇವಾಲಯದ ದೈನಂದಿನ ಪೂಜಾ ಕಾರ್ಯಕ್ರಮದ ಜವಾಬ್ದಾರಿ ತಹಶೀಲ್ದಾರ್‌ಗೆ ವಹಿಸಲಾಗಿದೆ.

## 'ಆಶ್ರಿತ ರೋಗಗಳ ನಿಯಂತ್ರಣದ ಬಗ್ಗೆ ಅರಿವು ಮೂಡಿಸಿ': ಎಡಿಸಿ ಸೂಚನೆ

ತುಮಕೂರು: ನಗರ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಡೆಂಗ್ಯೂ, ಚಿಕುಂಗುನ್ಯಾ, ಮೆದುಳುಜ್ವರ, ಆನೆ ಕಾಲು ರೋಗ, ಮಲೇರಿಯಾ ನಿಯಂತ್ರಣದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಮಲೇರಿಯಾ ಅಧಿಕಾರಿ ಡಾ|| ಕೆ.ಎಸ್. ರಂಗನಾಥ್ ಅವರಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ನ್ಯಾಯಾಲಯ ಸಭಾಂಗಣದಲ್ಲಿ ಸೋಮವಾರ ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ, ತಾಯಿ ಮರಣ ಮತ್ತು ಶಿಶು ಮರಣ ಪ್ರಕರಣಗಳ ಪರಿಶೀಲನೆಗೆ ಸಂಬಂಧಿಸಿದಂತೆ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮಲೇರಿಯ, ಡೆಂಗ್ಯೂ, ಚಿಕುಂಗುನ್ಯಾ, ಮೆದುಳುಜ್ವರ, ಆನೆ ಕಾಲು ರೋಗದ ಪ್ರಕರಣಗಳು ಬಾರದಂತೆ ಶಾಲಾ-ಕಾಲೇಜು, ವಸತಿ ನಿಲಯಗಳಲ್ಲಿಯೂ ಅರಿವು ಕಾರ್ಯಕ್ರಮಗಳನ್ನು ಏರ್ಪಡಿಸಬೇಕು ಎಂದು ಸೂಚಿಸಿದರು.

ಸೊಳ್ಳೆಗಳ ಮೂಲಕ ಡೆಂಗ್ಯೂ, ಚಿಕುಂಗುನ್ಯಾ, ಮೆದುಳುಜ್ವರ ರೋಗಗಳು ಹರಡುತ್ತಿದ್ದು, ಸೊಳ್ಳೆಗಳನ್ನು ನಿಯಂತ್ರಿಸಲು ಮನೆಯ ಸುತ್ತ-ಮುತ್ತ ನೀರು ನಿಲ್ಲದಂತೆ ಎಚ್ಚರವಹಿಸುವ; ಸ್ವಚ್ಛತೆ ಕಾಪಾಡಿಕೊಳ್ಳುವ; ನೀರಿನ ಬಾವಿ, ಕಾರಂಜಿ, ಕೆರೆ-ಕುಂಟೆ, ಹೊಂಡಗಳಿಗೆ ಸೊಳ್ಳೆ ಮರಿಗಳನ್ನು



ತಿನ್ನುವ; ಗ್ಯಾಂಬೂಸಿಯಾ ಮತ್ತು ಗಪ್ಪಿ ಲಾರ್ವಾಹಾರಿ ಮೀನುಗಳನ್ನು ಬಿಡುವ; ಹಠಾತ್ತನೆ ಬರುವ ತೀವ್ರ ಜ್ವರ, ತಲೆ ನೋವು, ವಾಕರಿಕೆ ಲಕ್ಷಣಗಳು ಕಂಡು ಬಂದಾಗ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯುವ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಆರೋಗ್ಯ, ಮಹಾನಗರಪಾಲಿಕೆ, ಶಿಕ್ಷಣ, ಮೀನುಗಾರಿಕೆ, ಸಮಾಜ ಕಲ್ಯಾಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಸೂಚನೆ ನೀಡಿದರು.

ಮಲೇರಿಯಾ ಅಧಿಕಾರಿ ಡಾ|| ಕೆ.ಎಸ್. ರಂಗನಾಥ್ ಮಾತನಾಡಿ ಜಿಲ್ಲೆಯಲ್ಲಿ 2020 ರಿಂದ 2025ರ ಏಪ್ರಿಲ್ ಮಾಹೆವರೆಗೆ 40 ಮಲೇರಿಯಾ, 305 ಮೈಕ್ರೋಫೈಲೇರಿಯಾ, 1807 ಡೆಂಗ್ಯೂ, 566 ಚಿಕುಂಗುನ್ಯಾ ಪ್ರಕರಣಗಳು ದೃಢಪಟ್ಟಿವೆ. ದೃಢಪಟ್ಟ ಎಲ್ಲಾ ಮಲೇರಿಯಾ ಹಾಗೂ ಮೈಕ್ರೋಫೈಲೇರಿಯಾ ಪ್ರಕರಣಗಳು ಇತರೆ ರಾಜ್ಯ ಮತ್ತು ಬೇರೆ ಜಿಲ್ಲೆಗಳಿಗೆ ಸೇರಿದ ಪ್ರಕರಣಗಳಾಗಿವೆ ಎಂದು ಮಾಹಿತಿ ನೀಡಿದರು.

ಆರ್‌ಸಿಹೆಚ್ ಅಧಿಕಾರಿ ಡಾ|| ಸಿ.ಆರ್. ಮೋಹನ್ ಅವರು ತಾಯಿ ಮರಣ ಮತ್ತು ಶಿಶು ಮರಣ ಪ್ರಕರಣಗಳ ಬಗ್ಗೆ ಮಾಹಿತಿ ನೀಡುತ್ತಾ, ಕಳೆದ 2024ರ ಏಪ್ರಿಲ್ ಮಾಹೆಯಿಂದ ಮಾರ್ಚ್ 2025ರವರೆಗೆ ಜಿಲ್ಲೆಯಲ್ಲಿ ಜನಿಸಿದ 28505 ಜೀವಂತ ಮಕ್ಕಳ ಪೈಕಿ 292 ಮಕ್ಕಳು ಹಾಗೂ 19 ತಾಯಿ ಮರಣ ಪ್ರಕರಣಗಳು ವರದಿಯಾಗಿವೆ. ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ 14, ಗುಬ್ಬಿ-16, ಕೊರಟಗೆರೆ-13, ಕುಣಿಗಲ್-8, ಮಧುಗಿರಿ-10, ಪಾವಗಡ-14, ಶಿರಾ ಮತ್ತು ತಿಪಟೂರು ತಲಾ 19, ತುಮಕೂರು-170, ತುರುವೇಕೆರೆ-9 ಸೇರಿದಂತೆ ಒಟ್ಟು 292 ಮಕ್ಕಳು ಹಾಗೂ ಚಿಕ್ಕನಾಯಕನಹಳ್ಳಿ, ಶಿರಾ, ತಿಪಟೂರು ತಾಲ್ಲೂಕಿನಲ್ಲಿ ತಲಾ 2, ಮಧುಗಿರಿ, ಪಾವಗಡ ತಾಲ್ಲೂಕಿನಲ್ಲಿ ತಲಾ 1, ತುಮಕೂರು ತಾಲ್ಲೂಕಿನಲ್ಲಿ 11 ಸೇರಿದಂತೆ 19 ತಾಯಿ ಮರಣ ಪ್ರಕರಣಗಳು ವರದಿಯಾಗಿವೆ. ಹಿಂದಿನ ವರ್ಷಗಳ ಅಂಕಿ-ಅಂಶಗಳನ್ನು ಹೋಲಿಸಿದಾಗ ಪ್ರಸಕ್ತ ವರ್ಷದಲ್ಲಿ ತಾಯಿ ಮತ್ತು ಶಿಶುವಿನ ಮರಣ ಪ್ರಮಾಣ ತಗ್ಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಹವಾಮಾನ ಬದಲಾವಣೆ ಮತ್ತು ಮಾನವ ಆರೋಗ್ಯದ ರಾಷ್ಟ್ರೀಯ ಕಾರ್ಯಕ್ರಮ ಕುರಿತ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಪೋಸ್ಟರ್ ಬಿಡುಗಡೆ ನಂತರ ಸಭೆಗೆ ಮಾಹಿತಿ ನೀಡಿದ ಮಲೇರಿಯಾ ಅಧಿಕಾರಿ ಡಾ|| ಕೆ.ಎಸ್. ರಂಗನಾಥ್ ಅವರು ಬಿಸಿಲಿನ ಶಾಖದಿಂದ ಮಕ್ಕಳಲ್ಲಿ ಕಾಣಿಸಿಕೊಳ್ಳುವ ಆರೋಗ್ಯ ಸಮಸ್ಯೆ, ಸೂರ್ಯಾಘಾತದ ನಿರ್ವಹಣೆ, ಸೂರ್ಯಾಘಾತಕ್ಕೆ ಪ್ರಥಮ ಚಿಕಿತ್ಸಾ ಕ್ರಮಗಳ ಬಗ್ಗೆ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಶಾಲಾ ಮಕ್ಕಳಿಗೆ ಪ್ರಾರ್ಥನಾ ಸಮಯದಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಡಾ|| ಪ್ರಭಾ, ಆರೋಗ್ಯ ಇಲಾಖೆಯ ವಿವಿಧ ಅಧಿಕಾರಿ/ಸಿಬ್ಬಂದಿ, ಲೋಕೋಪಯೋಗಿ ಇಲಾಖೆ, ಶಿಕ್ಷಣ ಇಲಾಖೆ, ವಾರ್ತಾ ಇಲಾಖೆ, ವಿವಿಧ ವೈದ್ಯಕೀಯ ಕಾಲೇಜಿನ ಮುಖ್ಯಸ್ಥರು ಸೇರಿದಂತೆ ಮತ್ತಿತರರು ಹಾಜರಿದ್ದರು.

## ಪಾಲಿಕೆ: ಆಸ್ತಿ ತೆರಿಗೆ ರಿಯಾಯಿತಿ ಅವಧಿ ಜೂನ್ 30ರವರೆಗೆ ವಿಸ್ತರಣೆ

ತುಮಕೂರು: ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ತಿ ತೆರಿಗೆ ಪಾವತಿಗೆ ಸಂಬಂಧಿಸಿದಂತೆ ಶೇ.5ರ?ಷ್ಟು ರಿಯಾಯಿತಿ ತೆರಿಗೆ ಪಾವತಿ ಮಾಡುವ ಅವಧಿಯನ್ನು ಜೂನ್ 30ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ಪಾಲಿಕೆ ಆಯುಕ್ತ ಬಿ.ವಿ.ಅಶ್ವಿಜ ತಿಳಿಸಿದ್ದಾರೆ.

ಆಸ್ತಿ ತೆರಿಗೆ ಪಾವತಿಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸಲು ಹಾಗೂ ಸ್ವಯಂ ತೆರಿಗೆ ಪಾವತಿಯನ್ನು ಉತ್ತೇಜಿಸಲು ಕಳೆದ ಏಪ್ರಿಲ್ 1 ರಿಂದ 30ರವರೆಗೆ ಮಾತ್ರ ಕಲ್ಪಿಸಲಾಗಿದ್ದ ಶೇ.5ರ?ಷ್ಟು ರಿಯಾಯಿತಿ ತೆರಿಗೆ ಪಾವತಿ ಅವಧಿಯನ್ನು ವಿಸ್ತರಿಸಲಾಗಿದ್ದು, ಜೂನ್ 30ರೊಳಗೆ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿಸಿದಲ್ಲಿ ಶೇ.5ರ?ಷ್ಟು ರಿಯಾಯಿತಿ ಲಭ್ಯವಾಗಲಿದೆ. ಮಹಾ ನಗರಪಾಲಿಕೆ ವ್ಯಾಪ್ತಿಯ ಆಸ್ತಿ ಮಾಲೀಕರು ಈ ಸದಾವಕಾಶದ ಪ್ರಯೋಜನ ಪಡೆಯಬೇಕೆಂದು ಅವರು ಮನವಿ ಮಾಡಿದ್ದಾರೆ.

## ದಸೂಡಿ ಕೃಷಿ ಸಹಕಾರ ಸಂಘಕ್ಕೆ ತಿಪ್ಪೇಸ್ವಾಮಿ ಅಧ್ಯಕ್ಷರಾಗಿ ಆಯ್ಕೆ

ಹುಳಿಯಾರು: ಹುಳಿಯಾರು ಹೋಬಳಿಯ ದಸೂಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ ಭಾನುವಾರ ನಡೆಯಿತು.

ಅಧ್ಯಕ್ಷರಾಗಿ ತಿಪ್ಪೇಸ್ವಾಮಿ ಮತ್ತು ಉಪಾಧ್ಯಕ್ಷರಾಗಿ ಚಂದ್ರನಾಯಕ್ ರವರು ಅವಿರೋಧವಾಗಿ ಆಯ್ಕೆಯಾದರು. ಚುನಾವಣಾ ಅಧಿಕಾರಿಯಾಗಿ ಮಹೇಶ್ ಮತ್ತು ಮಂಜುನಾಥ್ ಕರ್ತವ್ಯ ನಿರ್ವಹಿಸಿದ್ದರು.

ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಅಣ್ಣಪ್ಪ, ರಂಗನಾಥಪ್ಪ, ಜಯಣ್ಣ, ಪಂಚರತ್ನಮ್ಮ, ರಂಗಮಣಿ, ವೆಂಕಟೇಶ್, ರಮೇಶ್, ಅಳ್ಳಪ್ಪ ಭಾಗವಹಿಸಿದ್ದರು.

ಜೆಡಿಸ್ ಮುಖಂಡರುಗಳಾದ ಡಿ.ಬಿ.ರವಿಕುಮಾರ್, ತಾಪಂ ಮಾಜಿ ಸದಸ್ಯ ಪ್ರಸನ್ನ ಕುಮಾರ್, ಗ್ರಾಮ ಪಂಚಾಯಿತಿ ಸದಸ್ಯರಾದ ಕೆ.ಮರಿಯಪ್ಪ, ಬಲ್ಲಪ್ಪನಹಟ್ಟಿ ಎರ್ರಲ್ಲಪ್ಪ, ಯುವ ಮುಖಂಡರಾದ ಸುಬ್ರಹ್ಮಣ್ಯ, ದೇವರಾಜ್ ಮುಂತಾದವರು ನೂತನ ಅಧ್ಯಕ್ಷ, ಉಪಾಧ್ಯಕ್ಷರಿಗೆ ಶುಭಹಾರೈಸಿದರು.

## ಬಿ.ವಿ.ಎ-ಚಿತ್ರಕಲಾ ಪದವಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ತುಮಕೂರು: ನಗರದ ರೇಲ್ವೆ ಸ್ಟೇಷನ್ ರಸ್ತೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡದಲ್ಲಿರುವ ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯದಲ್ಲಿ 2025-26ನೇ ಸಾಲಿನ ಬಿ.ವಿ.ಎ.(ದೃಶ್ಯಕಲಾ)-ಚಿತ್ರಕಲಾ ಪದವಿ ತರಗತಿ ಪ್ರವೇಶಾತಿಗಾಗಿ ಆಸಕ್ತ ಪಿ.ಯು.ಸಿ / ಐಟಿಐ / ಡಿಪ್ಲೋಮಾ / 10+2 / ತತ್ಸಮಾನ ವಿದ್ಯಾರ್ಹತೆ ಹೊಂದಿರುವವರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಲದೆ, ಹೊಸದಾಗಿ ಬಿ.ವಿ.ಎ.-ಅನಿಮೇಷನ್ ಪದವಿ ಮತ್ತು ಬಿವಿಎ-ಗ್ರಾಫಿಕ್ಸ್ ಡಿಸೈನ್ ಪದವಿ ಕೋರ್ಸುಗಳನ್ನು ಪ್ರಾರಂಭಿಸಲಾಗಿದ್ದು, ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದೆ. ಈ ಪದವಿಗಳು ವಿವಿಧ ವೃತ್ತಿ ಕೌಶಲ್ಯಗಳನ್ನೊಳಗೊಂಡಿದ್ದು, ಪದವಿ ಪೂರ್ಣಗೊಂಡ ಬಳಿಕ ಉದ್ಯೋಗಾವಕಾಶಗಳನ್ನು ಪಡೆಯಬಹುದಾಗಿದೆ ಅಥವಾ ಸ್ವಯಂ ಉದ್ಯೋಗ ಕೈಗೊಳ್ಳಬಹುದಾಗಿದೆ.

ದೃಶ್ಯಕಲಾ ಪದವಿಗಳು 4 ವರ್ಷದ ಅವಧಿಯ 8 ಸೆಮಿಸ್ಟರ್‌ಗಳಲ್ಲಿ ನಡೆಯಲಿದ್ದು, ಬಿ.ವಿ.ಎ-ಪೇಟಿಂಗ್, ಬಿ.ವಿ.ಎ-ಅನಿಮೇಶನ್, ಬಿ.ವಿ.ಎ-ಗ್ರಾಫಿಕ್ ಡಿಸೈನಿಂಗ್ ಪದವಿ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಬಹುದು.

ಪ್ರವೇಶಕ್ಕಾಗಿ ಆನ್‌ಲೈನ್ / ಆಫ್‌ಲೈನ್ ಮೂಲಕವೂ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವೇಶಾತಿ ಪಡೆಯಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 8147870998 / 9886744229ನ್ನು ಸಂಪರ್ಕಿಸಬಹುದಾಗಿದೆ ಎಂದು ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಶಿರಾ ತಾಲೂಕು ಬುಕ್ಕಾಪಟ್ಟಣದ ಶ್ರೀ ಉದ್ಭವ ಗಣಪತಿ ದೇವಸ್ಥಾನದಲ್ಲಿ ಭಾರತದ ರಕ್ಷಣೆಗಾಗಿ ಯುದ್ಧದಲ್ಲಿ ಹೋರಾಡುತ್ತಿರುವ ಯೋಧರ ಯಶಸ್ಸು, ಸಂರಕ್ಷಣೆಗಾಗಿ ವಿಶೇಷ ಪೂಜೆ ಕೈಗೊಳ್ಳಲಾಯಿತು. ಬಿ.ಆರ್.ಮಂಜುನಾಥ್, ಶಾಂತಕುಮಾರ್, ಕಾಂತರಾಜು, ಪ್ರಭಾಕರ್, ಜಗನ್ನಾಥ್, ನಾಗೇಶ್ ಸೇರಿದಂತೆ ಅನೇಕರು ಇದ್ದರು.

# ಹುಳಿಯಾರು ಪಪಂನಿಂದ ಮಳಿಗೆ ಹಸ್ತಾಂತರಿಸಲು 6 ಮಳಿಗೆದಾರರಿಗೆ ನೋಟಿಸ್

## ಮಳೆಗಾಲದಲ್ಲಿ ಅಂಗಡಿ ಕುಸಿಯಬಹುದು ಎಂಬ ಕಾರಣ ನೀಡಿ ಮಳಿಗೆ ಹಸ್ತಾಂತರಿಸಲು ಸೂಚನೆ

*ಹುಳಿಯಾರು: ಹುಳಿಯಾರು ಪಟ್ಟಣ ಪಂಚಾಯ್ತಿ ಮತ್ತೆ ವಾಣಿಜ್ಯ ಮಳಿಗೆಗಳ ವಿಚಾರಕ್ಕೆ ಕೈ ಹಾಕಿದೆ. ಕಳೆದ ಕೆಲ ತಿಂಗಳ ಹಿಂದೆ ನೋಟಿಸ್ ನೀಡದೆ ಮಳಿಗೆಗಳಿಗೆ ಬೀಗ ಹಾಕಿ ಪೇಚಿಗೆ ಸಿಲುಕಿ ಮರುದಿನವೇ ಬೀಗ ತೆಗೆಸಿ ಸುದ್ದಿಯಾಗಿತ್ತು. ಈಗ 6 ಮಳಿಗೆದಾರರಿಗೆ ತೆರವು ಮಾಡಲು ನೋಟಿಸ್ ನೀಡಿ ಮತ್ತೆ ಸಾರ್ವಜನಿಕ ಚರ್ಚೆಗೆ ಕಾರಣವಾಗಿದೆ.*




ಹುಳಿಯಾರು ಪಟ್ಟಣ ಪಂಚಾಯಿಯು 4 ಬ್ಲಾಕ್ ನಲ್ಲಿ ಒಟ್ಟು 52 ಅಂಗಡಿ ಮಳಿಗೆಗಳನ್ನು ಹೊಂದಿದ್ದು ಹಲವಾರು ವರ್ಷಗಳ ಹಿಂದೆಯೇ ಹರಾಜು ಪ್ರಕ್ರಿಯೆ ಮೂಲಕ ವಿತರಣೆ ಮಾಡಲಾಗಿದೆ. ಪ್ರತಿ ಐದು ವರ್ಷಗಳಿಗೊಮ್ಮೆ ನಡೆಯುತ್ತಿದ್ದ ಹರಾಜಿನಲ್ಲಿ ಹಾಲಿ ಮಳಿಗೆದಾರರಿಗೆ ಬಾಡಿಗೆ ಹೆಚ್ಚಳ ಮಾಡುವ ಮೂಲಕ ನವೀಕರಿಸಿಕೊಂಡು ಬಂದಿದೆ. ಇದೀಗ ಪಟ್ಟಣ ಪಂಚಾಯಿತಿಯಾಗಿ ಬದಲಾದ ಹಿನ್ನೆಲೆಯಲ್ಲಿ ಸರ್ಕಾರದ ನಿರ್ದೇಶನದಂತೆ ನವೀಕರಿಸುವ ಬದಲು ಹರಾಜು ಹಾಕುವ ಪ್ರಕ್ರಿಯೆ ಮಾಡಬೇಕಿದೆ. ಆದರೆ ಹಾರಾಜು ಹಾಕುವುದನ್ನು ಬಿಟ್ಟು ಬೀಗ ಹಾಕುವ, ನೋಟಿಸ್ ನೀಡುವ, ಸಭೆಯಲ್ಲಿ ಗಂಭೀರವಾಗಿ ಚರ್ಚಿಸುವುದಕಷ್ಟೆ ಕಳೆದ ಐದಾರು ವರ್ಷಗಳಿಂದ ಕಾಲಾಹರಣ ಮಾಡುತ್ತಿದೆ.

ಇಷ್ಟೂ ಮಳಿಗೆಗಳ ಬಾಡಿಗೆ ಕಾರಾರು ಅವಧಿ 2018 ಕ್ಕೆ ಮುಗಿದಿದ್ದು 2019 ರಲ್ಲಿ ಇ-ಹರಾಜಿಗೆ ಪಂಚಾಯ್ತಿ ಮುಂದಾಗಿತ್ತು. ಆಗ ಮಳಿಗೆದಾರರು ಕೋರ್ಟ್ ಮೆಟ್ಟಿಲೇರಿದ್ದರಿಂದ ಹರಾಜು ಪ್ರಕ್ರಿಯೆ ಅರ್ಧಕ್ಕೆ ನಿಂತಿತು. ಆದಾದ ನಂತರ ಇಷ್ಟು ವರ್ಷ ಇವರ ತಂಟೆಗೆ ಹೋಗದ ಪಂಚಾಯ್ತಿ ಕಳೆದ ಕೆಲ ತಿಂಗಳ ಹಿಂದಷ್ಟೆ ನೋಟಿಸ್ ನೀಡದೆ ಮಳಿಗೆಗಳ ಬಾಡಿಗೆ ಅವಧಿ ಮೀರಿದೆ ಎಂದು ಪೊಲೀಸ್ ಬಂದೋಬಸ್ತಿನಲ್ಲಿ ಬೀಗ ಜಡಿದಿತ್ತು. ಮರುದಿನವೇ ಆಡಳಿತಾಧಿಕಾರಿಯಾಗಿದ್ದ ತಹಸೀಲ್ದಾರ್ ಅವರು ಕಾನೂನುಬಾಹೀರವಾಗಿ ಕ್ರಮ ಕೈಗೊಳ್ಳುವುದು ನ್ಯಾಯಸಮ್ಮತವಲ್ಲವೆಂದು ಅಷ್ಟೂ ಮಳಿಗೆಗಳ ಬೀಗ ತೆಗೆಸಿದ್ದರು. ನಂತರ ಪಂಚಾಯ್ತಿ ಸದಸ್ಯರು ಮತ್ತು ಮಳಿಗೆದಾರರ ಸಭೆ ನಡೆಸಿ ಇಬ್ಬರ ಅಹವಾಲು ಆಲಿಸಿ ಸುಮ್ಮನಾದರು.

ಈಗ ಮತ್ತೆ ಪಂಚಾಯ್ತಿ ಮಳಿಗೆ ವಿಚಾರ ಮುನ್ನೆಲೆಗೆ ಬಂದಿದೆ. 52 ಮಳಿಗೆಗಳ ಪೈಕಿ ಖಾಸಗಿ ಬಸ್ ನಿಲ್ದಾಣದಲ್ಲಿ ಇರುವ 6 ಮಳಿಗೆಗಳು ಹಾಗೂ ಒಂದು ಹೋಟೆಲ್‌ನ ಬಾಡಿಗೆದಾರರಿಗೆ ನೋಟಿಸ್ ನೀಡಿದೆ. ಈ ಕಟ್ಟಡಗಳು ತೀರ ಹಳೆಯದಾಗಿದ್ದು ಶಿಥಿಲಾವಸ್ಥೆಯಲ್ಲಿ ಇರುವುದರಿಂದ ಒಡೆದು ಪುನಃ ನಿರ್ಮಿಸಬೇಕಿದೆ ಎಂದು ಲೋಕೋಪಯೋಗಿ ಇಲಾಖೆ ವರದಿ ನೀಡಿದೆ ಎನ್ನುವ ಕಾರಣ ಮುಂದಿಟ್ಟಿದೆ. ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಮಳಿಗೆ ಕುಸಿಯಬಹುದು ಎಂಬ ಕಾರಣವೊಡ್ಡಿ ಬಾಡಿಗೆ ಹಣ ಚುಕ್ತಾ ಮಾಡಿ ಮಳಿಗೆ ಹಸ್ತಾಂತರಿಸುವಂತೆ ತಿಳುವಳಿಕೆ ಪತ್ರದಲ್ಲಿ ಸೂಚಿಸಿದ್ದಾರೆ.

ಆದರೆ ಆ ಪತ್ರದಲ್ಲಿ ಬಾಡಿಗೆ ಹಣ ಎಷ್ಟು ಬಾಕಿ ಇದೆ ಎಂಬುದಾಗಲಿ, ಅವರುಗಳು ಎಂದು ಖಾಲಿ ಮಾಡಿಕೊಡಬೇಕು ಎಂಬುವುದಾಗಲಿ ತಿಳಿಸಿಯೇ ಇಲ್ಲ. ಮಳಿಗೆದಾರರು ಬಾಡಿಗೆ ಹಣ ಪೂರಾ ಚುಕ್ತ ಮಾಡಿದ್ದರು ಸಹ ಪಂಚಾಯಿತಿಯಲ್ಲಿ ಡಿಸಿಬಿ ರಿಜಿಸ್ಟರ್ ಸರಿಯಾಗಿ ನಿರ್ವಹಿಸದಿರುವುದರಿಂದ ಬಾಡಿಗೆ ಚುಕ್ತಾ ಆಗಿದೆಯೋ ಇಲ್ಲ ಬಾಕಿ ಇದೆಯೋ ಎಂಬುದರ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಅಂಗಡಿದಾರರಿಗೆ ವಾಪಸ್ ನೀಡಬೇಕಾಗಿರುವ ಡಿಪಾಸಿಟ್ ಹಣದ ಬಗ್ಗೆ ಚಕಾರವೇ ಎತ್ತುತ್ತಿಲ್ಲ.

ಅಚ್ಚರಿ ಎನ್ನುವಂತೆ ಪಂಚಾಯ್ತಿಯವರು ನಮ್ಮಿಂದ ಹೆಚ್ಚಿನ ಬಾಡಿಗೆ ವಸೂಲಿ ಮಾಡಿದ್ದು ಬಾಕಿ ಹಣವನ್ನು ಅದರಲ್ಲೇ ಮುರಿದುಕೊಂಡು ಹಣ ವಾಪಸ್ಸು ಕೊಡಬೇಕಾಗಿದೆ ಎಂಬುದು ಮಳಿಗೆದಾರರ ವಾದವಾಗಿದೆ. ಅಲ್ಲದೆ ಅದೇ ಸ್ಥಳದಲ್ಲಿ ಮಳಿಗೆ ಕಟ್ಟಿ ಹಾಲಿ ಮಳಿಗೆದಾರರಿಗೆ ಅವಕಾಶ ಕಲ್ಪಿಸಲಾಗುವುದು ಇಲ್ಲವೋ ಎಂಬುದ ಸ್ಪಷ್ಟವಾದ ನಿರ್ದೇಶನವೇ ಇಲ್ಲ. ಪುನಹ ವಾಣಿಜ್ಯ ಸಂಕೀರ್ಣ ಕಟ್ಟಲು ಪ್ಲಾನ್, ಎಸ್ಟಿಮೇಶನ್ ಹಾಗೂ ಅನುದಾನ ಇಡಲಾಗಿದೆಯಾ ಎಂಬುದರ ಬಗ್ಗೆ ಅಧಿಕಾರಿಗಳು ಮಾಹಿತಿಯೇ ನೀಡುವುದಿಲ್ಲ.

ಪಂಚಾಯಿತಿ ಒಡೆತನದ ಮಳಿಗೆಯ ಬಾಡಿಗೆ ಅವಧಿ ಕರಾರು ಮುಗಿದಿರುವ ಮಳಿಗೆಗಳನ್ನು ಖುಲ್ಲಾ ಪಡಿಸಲು ಮುಂದಾಗಿರುವ ಪಟ್ಟಣ ಪಂಚಾಯಿತಿ ನಿಯಮಬಾಹಿರ ಕ್ರಮಗಳನ್ನು ಅನುಸರಿಸಿ ಪುನಃ ಕೋರ್ಟು ಕಚೇರಿ ಅಲೆದಾಡಲು ಅವಕಾಶ ಮಾಡಿಕೊಡದಂತೆ ಎಚ್ಚರಿಕೆಯ ಹೆಜ್ಜೆ ಇಡಬೇಕಿದೆ. ಹಾಗಾಗಿ ಸರ್ಕಾರದ ಸುತ್ತೋಲೆಯಂತೆ ಕರ್ನಾಟಕ ಸಾರ್ವಜನಿಕ ಆವರಣಗಳ ಅನಧಿಕೃತ ಅಧಿಭೋಗದಾರರನ್ನು ಹೊರ ಹಾಕುವ ಅಧಿನಿಯಮ 1974 ರನ್ನು ಪಾಲಿಸಬೇಕಿದೆ. ಇಲ್ಲವಾದರೆ ಮತ್ತೆ ಬಾಡಿಗೆದಾರರ ಮತ್ತು ಪಂಚಾಯ್ತಿಯ ಕಾನೂನು ಸಂಘರ್ಷ ನಿಶ್ಚಿತ.

## ಜಾಲತಾಣ ಸುಳ್ಳು ಸಂದೇಶ: ಪಿಎಸ್‌ಐ ತೀರ್ಥೇಶ್ ಎಚ್ಚರಿಕೆ



ಕೊರಟಗೆರೆ: ಕಾಶ್ಮೀರದಲ್ಲಿ ಭಯೋತ್ಪಾದಕರ ದಾಳಿಗೆ ಅನೇಕ ಭಾರತೀಯರು ಪ್ರಾಣ ಕಳೆದುಕೊಂಡಿದ್ದಾರೆ. ಆಪರೇಷನ್ ಸಿಂಧೂರ ಮೂಲಕ ದೇಶದ ಸೈನ್ಯ ಈಗಾಗಲೇ ಭಯೋತ್ಪಾದಕರನ್ನು ನೆಲಸಮ ಮಾಡಿ ಪ್ರತೀಕಾರವನ್ನು ತೀರಿಸಿಕೊಂಡಿದೆ. ಸಾಮಾಜಿಕ ಜಾಲತಾಣಗಳಲ್ಲಿ ಇತ್ತೀಚೆಗೆ ಸುಳ್ಳು ಸಂದೇಶಗಳು ಹೆಚ್ಚಾಗಿ ರವಾನೆಯಾಗುತ್ತಿದ್ದು, ಸಾರ್ವಜನಿಕರು ಎಚ್ಚರ ವಹಿಸುವಂತೆ ಪಿಎಸ್‌ಐ ತೀರ್ಥೇಶ್ ತಿಳಿಸಿದರು.

ಅವರು ಪಟ್ಟಣದ ಎಸ್‌ಎಸ್‌ಆರ್ ವೃತ್ತದಲ್ಲಿ ಕೊರಟಗೆರೆ ಪೊಲೀಸ್ ಇಲಾಖೆ ಮತ್ತು ಆರೋಗ್ಯ ಇಲಾಖೆಯಿಂದ ಭಾರತ ಮತ್ತು ಪಾಕಿಸ್ತಾನ ನಡುವೆ ನಡೆಯುತ್ತಿರುವ ಯುದ್ಧದ ಬೆಳವಣಿಗೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ, ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಭಾರತೀಯ ಸೈನ್ಯ ನಮ್ಮ ದೇಶದ ಪ್ರಜೆಗಳಿಗೆ ಯಾವುದೇ ತೊಂದರೆಯಾಗದಂತೆ ಯೋಜನೆ ರೂಪಿಸಿಕೊಂಡಿದೆ. ಭಯೋತ್ಪಾದಕರ ಕಣ್ಣು ಐಪಿಎಲ್ ಟೂರ್ನಿಯ ಮೇಲೆ ಬಿದ್ದಿತ್ತು. ಆದ್ದರಿಂದ ಬಿಸಿಸಿಐ ನೇರ ಪ್ರಸಾರವನ್ನು ರದ್ದುಗೊಳಿಸಿದೆ. ಭಾರತೀಯ ಸೇನೆಯ ಬಗ್ಗೆ 3 ಪೊಲೀಸ್ ಸಾಮಾಜಿಕ ಜಾಲತಾಣಗಳಲ್ಲಿ ಫೇಕ್ ಅಕೌಂಟ್ ನಿಂದ ಸುಳ್ಳು ವಿಚಾರಗಳು ಹರಿಯುತ್ತಿದೆ. ಸಾರ್ವಜನಿಕರು ಸುಳ್ಳು ವಿಷಯಗಳನ್ನು ಶೇರ್ ಮಾಡಿದ್ದು ಕಂಡುಬಂದರೆ ಅಂತಹವರನ್ನು ಕಾನೂನು ಶಿಕ್ಷೆಗೆ ಗುರಿಪಡಿಸಲಾಗುವುದು. ಆದ್ದರಿಂದ ಭಯಬೇಡ ಎಚ್ಚರಿಕೆ ಇರಲಿ ಎಂದು ಅರಿವು ಮೂಡಿಸಿದರು.

ಸಾರ್ವಜನಿಕರು ಎಚ್ಚರಿಕೆಯಿಂದ ವಾಹನ ಚಲಾಯಿಸಿ, ಬಿಸಿಲಿನ ತಾಪ ಹೆಚ್ಚಾಗಿರುವ ಕಾರಣ ದ್ವಿಚಕ್ರ ವಾಹನ ಸವಾರರು, ಕಾರು ಚಾಲಕರು ವಾಹನ ಚಲಾಯಿಸುವಾಗ ಎಚ್ಚರಿಕೆಯಿಂದ ಚಲಾಯಿಸಬೇಕಿದೆ. ಪೆಟ್ರೋಲ್ ಮತ್ತು ಡಿಸೇಲ್ ಲೀಕೇಜ್‌ನಿಂದ ವಾಹನಗಳು ಹೊತ್ತಿ ಉರಿಯುತ್ತಿವೆ. ಇಂತಹ ಸಂದರ್ಭದಲ್ಲಿ ಚಲಾವಣೆ ಮಾಡಿದಲ್ಲಿ ಪ್ರಾಣಕ್ಕೆ ಅಪಾಯ ಎದುರಾಗಲಿದೆ. ಇಂತಹ ಸಂದರ್ಭಗಳಲ್ಲಿ ವಾಹನದಿಂದ ದೂರ ಉಳಿದು ಸುರಕ್ಷಿತ ಜಾಗಕ್ಕೆ ಬಂದು ನಿಂತು ಅಗ್ನಿಶಾಮಕ ದಳದ ಸಹಾಯವಾಣಿಗೆ ಕರೆ ಮಾಡಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಸರ್ಕಲ್ ಇನ್‌ಸ್ಪೆಕ್ಟರ್ ಅನಿಲ್, ಪಿಎಸ್‌ಐ ಬಸವರಾಜು, ಎಎಸ್‌ಐ ನಾಗರಾಜು, ಪ್ರದೀಪ್‌ಕುಮಾರ್, ಪ್ರಸಾದ್, ಚೆನ್ನಮಲ್ಲಿಕಾರ್ಜುನ್, ರಾಜಣ್ಣ, ದೊಡ್ಡಲಿಂಗಯ್ಯ, ರವಿ ಎಲ್.ಎನ್, ಮೋಹನ್, ರವಿ, ರಂಗನಾಥ್, ದಯಾನಂದ್, ಮಲ್ಲೇಶ್ ಸೇರಿದಂತೆ ಇತರರು ಇದ್ದರು.

## ಮೇ 16ರಂದು ಉದ್ಯೋಗಕ್ಕಾಗಿ ನೇರ ಸಂದರ್ಶನ

ತುಮಕೂರು: ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಅಕ್ಷಯ ಬಯೋಟೆಕ್, ಟಿ.ವಿ.ಎಸ್. ಎಲೆಕ್ಟ್ರಾನಿಕ್ಸ್ ಹಾಗೂ ಶ್ರೀ ರಾಮ್ ಲೈಫ್ ಇನ್ಸುರೆನ್ಸ್ ಪ್ರೈ.ಲಿಮಿಟೆಡ್ ಸಂಸ್ಥೆಯ ಸಹಯೋಗದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಸಂಬಂಧ ಮೇ 16ರಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ.

ಸಂದರ್ಶನವು ಅಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದ್ದು, ಎಸ್.ಎಸ್.ಎಲ್.ಸಿ., ಪಿ.ಯು.ಸಿ, ಐ.ಟಿ.ಐ. ಡಿಪ್ಲೊಮಾ(ಯಾವುದೇ ಟ್ರೇಡ್) ಹಾಗೂ ಯಾವುದೇ ಪದವಿ ಪಾಸಾದ ಅಭ್ಯರ್ಥಿಗಳು ತಮ್ಮ ಬಯೋಡೇಟಾದೊಂದಿಗೆ ಈ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816-2278488, ಮೊ.ಸಂ. 9071021143/ 9513136642ನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಕಿಶೋರ್ ಕುಮಾರ್ ತಿಳಿಸಿದ್ದಾರೆ.

## ನಾಳೆಯಿಂದ ದೇವಾಲಯಗಳ ಉದ್ಘಾಟನಾ ಸಮಾರಂಭ

ತುಮಕೂರು: ಗುಬ್ಬಿ ತಾಲ್ಲೂಕು ಚೇಳೂರು ಹೋಬಳಿ ದಿಬ್ಬದಹಳ್ಳಿ ಗೊಲ್ಲರಹಟ್ಟಿಯಲ್ಲಿ ಮೇ 14 ರಿಂದ 16ರವರೆಗೆ ವಿವಿಧ ದೇವರುಗಳ ದೇವಾಲಯ ಉದಾಟನಾ ಸಮಾರಂಭದ ಅಂಗವಾಗಿ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಶ್ರೀ ಪ್ರಸನ್ನ ಗಣಪತಿ, ಶ್ರೀ ಸುಬ್ರಹ್ಮಣ್ಯ, ಶ್ರೀ ರಂಗನಾಥಸ್ವಾಮಿ, ಶ್ರೀ ಯಲ್ಲಮ್ಮ ದೇವಿ ದೇವರುಗಳ ವಿಗ್ರಹಗಳ ಸ್ಥಿರಬಿಂಬ, ಗರುಡಗಂಭ, ವಿಮಾನ ಗೋಪುರ, ಕಳಶ ಪ್ರತಿಷ್ಠಾಪನಾ ಮಹೋತ್ಸವ ನಡೆಯುವುದು

ಮೇ 14 ರಂದು ಮಧ್ಯಾಹ್ನ 2 ಗಂಟೆಗೆ ದೇವರುಗಳ ಗಂಗಾಸ್ನಾನ, 4.30ಕ್ಕೆ ಗ್ರಾಮಕ್ಕೆ ದೇವರುಗಳ ಆಗಮನ, ಗ್ರಾಮ ಪ್ರದಕ್ಷಿಣೆ ಕಾರ್ಯಕ್ರಮಗಳು ಜರುಗಲಿವೆ. ಮೇ 15 ರಂದು ಬೆಳಗ್ಗೆ 4.30 ರಿಂದ ಸ್ಥಿರಬಿಂಬ ಪ್ರತಿಷ್ಠಾಪನೆ, 9 ರಿಂದ 10.30ರವರೆಗೆ ವಿಮಾನ ಗೋಪುರ ಕಳಶ ಪ್ರತಿಷ್ಠಾಪನೆ, ಪೂರ್ಣಾಹುತಿ, ಮಹಾಮಂಗಳಾರತಿ ನಡೆಯುವುದು.

ಗುರುವಾರ ಬೆಳಗ್ಗೆ 11 ರಿಂದ 12 ಗಂಟೆಯವರೆಗೆ ಬಹಿರಂಗ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಅರ್ಚಕರುಗಳಾದ ಪಾಪಣ್ಣ, ಗೋಪಾಲಯ್ಯ, ಶಿವಕುಮಾರಸ್ವಾಮಿ, ನಾರಾಯಣಪ್ಪ, ಓದೋರಂಗಯ್ಯ ಉಪಸ್ಥಿತರಿರುವರು. ಕರ್ನಾಟಕ ರಾಜ್ಯ ಕಾಡುಗೊಲ್ಲರ ಸಂಘದ ಅಧ್ಯಕ್ಷರಾದ ಬಿಬಿಎಂಪಿ ರಾಜಣ್ಣ ಅವರ ಉಪಸ್ಥಿತಿಯಲ್ಲಿ ಹಾಲು ಒಕ್ಕೂಟದ ನಿರ್ದೇಶಕಿ ಭಾರತಿ ಶ್ರೀನಿವಾಸ್ ಮತ್ತಿತರರು ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಎನ್.ಬೆಟ್ಟಸ್ವಾಮಿ, ಜಿ. ಎಸ್.ನಾಗರಾಜು, ಎಸ್.ಡಿ.ದಿಲೀಪ್ ಕುಮಾರ್, ಚಂದ್ರಶೇಖರ ಬಾಬು, ತಿಮ್ಮಣ್ಣ, ಚಿಕ್ಕೀರಯ್ಯ, ಚಿಕ್ಕಪ್ಪಯ್ಯ, ಷಣ್ಮುಖಪ್ಪ, ಯಶೋಧಾ ಶಿವಣ್ಣ, ಪ್ರೇಮಾ ಮಹಾಲಿಂಗಪ್ಪ, ಭಾರತಿ ಹಿತೇಶ್ ಮೊದಲಾದವರು ಭಾಗವಹಿಸುವರು. ಶಾಸಕ ಎಸ್.ಆರ್. ಶ್ರೀ ನಿವಾಸ್ ಅಧ್ಯಕ್ಷತೆ ವಹಿಸುವರು. ದಿವ್ಯ ಸಾನಿಧ್ಯವನ್ನು ಡಾ.ಬಸವ ರಮಾನಂದ ಸ್ವಾಮಿಗಳು ವಹಿಸಲಿದ್ದು, ತುಮಕೂರು ಹಾಗೂ ಜಿಲ್ಲೆಯ ಗೊಲ್ಲ ಸಮುದಾಯದ ವಿವಿಧ ಮುಖಂಡರುಗಳು, ಸಮುದಾಯದ ಚಿಂತಕರು ಈ ಸಮಾರಂಭದಲ್ಲಿ ಉಪಸ್ಥಿತಿರುವರು ಎಂದು ನಿವೃತ್ತ ಮುಖ್ಯ ಶಿಕ್ಷಕ ದೊಡ್ಡವೀರಯ್ಯ, ಸಹಾಯಕ ಇಂಜಿನಿಯರ್ ಈರಣ್ಣ, ಉಪನ್ಯಾಸಕ ಚಂದ್ರಪ್ಪ ಅವರುಗಳು ತಿಳಿಸಿದ್ದಾರೆ.

## ವಿಶೇಷ ಚೇತನ ವಿದ್ಯಾರ್ಥಿಗಳಿಂದ ಡಿಪ್ಲೋಮಾ ಪ್ರವೇಶಾತಿಗೆ ಅರ್ಜಿ ಆಹ್ವಾನ

ತುಮಕೂರು: ಮೈಸೂರಿನ ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ವತಿಯಿಂದ 3 ವರ್ಷಗಳ ಅವಧಿಯ ವಿವಿಧ ಡಿಪ್ಲೊಮಾ ಕೋರ್ಸುಗಳ ಪ್ರವೇಶಕ್ಕೆ ಅರ್ಹ ವಿಕಲಚೇತನ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್, ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್(ಫಾರ್ ವಿಜ್ಯುವಲಿ ಇಂಪೇರ್ಡ್), ಅಪೆರಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ & ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ ಕೋರ್ಸುಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿಶೇಷ ಚೇತನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ವಿದ್ಯಾರ್ಥಿ ವೇತನದ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್‌ನ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸಿಕೊಡಲಾಗುವುದು. ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿದ್ಯಾರ್ಥಿ ನಿಲಯದ ಸೌಲಭ್ಯ ಕಲ್ಪಿಸಲಾಗುವುದು.

ಅರ್ಹ ವಿದ್ಯಾರ್ಥಿಗಳು (ಸಾಮಾನ್ಯ ವರ್ಗದ ಅಭ್ಯರ್ಥಿಗಳು 100 ರೂ. ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗ/ಪ್ರವರ್ಗ-1ಕ್ಕೆ ಸೇರಿದವರಿಗೆ 50 ರೂ.ಗಳ) ಮೈಸೂರಿನಲ್ಲಿ ಸಂದಾಯವಾಗುವಂತೆ ಪ್ರಾಂಶುಪಾಲರು, ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್, ಮೈಸೂರು-570006 ಇವರಿಗೆ ನಗದು ಅಥವಾ ಡಿಡಿಯನ್ನು ಕಳುಹಿಸಿ ಪ್ರವೇಶ ಅರ್ಜಿಗಳನ್ನು ಪಡೆಯಬಹುದು ಅಥವಾ ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಅಂಧತ್ವ(6/60 ಅಥವಾ 20/200 ಸ್ನೆಲೆನ್) ಹೊಂದಿರುವ ವಿಶೇಷ ಚೇತನರು, ಮೂಳೆ ಮತ್ತು ಕೀಲು ಅಂಗವಿಕಲತೆ(ಶೇ.40 ಮತ್ತು ಮೇಲ್ಪಟ್ಟ) ಹಾಗೂ ಕಿವುಡು ಮತ್ತು ಮೂಕ ಅಂಗವಿಕಲತೆ(60 ಡಿಬಿ ಮತ್ತು ಮೇಲ್ಪಟ್ಟ) ಹೊಂದಿದ್ದವರು ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ವೆಬ್‌ಸೈಟ್: www.jsspda.org / ಇ-ಮೇಲ್ ಅಥವಾ ದೂ.ವಾ.ಸಂ. 9844644937ನ್ನು ಸಂಪರ್ಕಿಸಬಹುದಾಗಿದೆ. ಭರ್ತಿ ಮಾಡಿದ ಅರ್ಜಿಯನ್ನು ಜೂನ್ 16ರೊಳಗೆ ಮೇಲ್ಕಂಡ ವಿಳಾಸಕ್ಕೆ ತಲುಪಿಸಬೇಕೆಂದು ಪ್ರಕಟಣೆ ತಿಳಿಸಿದೆ.

## ಶ್ರೀದೇವಿ ಕಾಲೇಜಿನಲ್ಲಿ ಅಂತರರಾಷ್ಟ್ರೀಯ ಶುಶ್ರೂಷಕರ ದಿನಾಚರಣೆ




ತುಮಕೂರು: ಇತ್ತೀಚಿನ ದಿನಗಳಲ್ಲಿ ನರ್ಸಿಂಗ್ ಕ್ಷೇತ್ರದಲ್ಲಿ ಶುಶ್ರೂಷಕರಾಗಲು ಅಗತ್ಯವಾದ ಗುಣಗಳನ್ನು ಬೆಳೆಸಿಕೊಳ್ಳಬೇಕು. ಹಾಗೂ ನರ್ಸಿಂಗ್ ಕ್ಷೇತ್ರದಲ್ಲಿ ಹೆಚ್ಚು-ಹೆಚ್ಚು ಕಲಿಕಾ ಪ್ರಯೋಗಗಳು ಒಳಗೊಳ್ಳಬೇಕು ಹಾಗೂ ವಿದ್ಯಾರ್ಥಿಗಳು ಜೀವನದಲ್ಲಿ ಲಭಿಸುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್.ಪಾಟೀಲ್‌ರವರು ತಿಳಿಸಿದರು.

ನಗರದ ಶ್ರೀದೇವಿ ನರ್ಸಿಂಗ್ ಕಾಲೇಜು ಹಾಗೂ ಶ್ರೀ ರಮಣಮಹರ್ಷಿ ನರ್ಸಿಂಗ್ ಕಾಲೇಜು, ಶ್ರೀದುಗಾಂಬಾ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಅಂಗವಾಗಿ "ಅಂತರರಾಷ್ಟ್ರೀಯ ಶುಶ್ರೂಷಕರ ದಿನಾಚರಣೆ"ಯನ್ನು ಮೇ 12ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ಕಾಲೇಜಿನ ಆವರಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಆಗಮಿಸಿದ್ದ ತುಮಕೂರಿನ ಜಿಲ್ಲಾಸ್ಪತ್ರೆಯ ನರ್ಸಿಂಗ್ ಅಧೀಕ್ಷಕರಾದ ಗಾಯತ್ರಿರವರು ಮಾತನಾಡುತ್ತಾ 2025ರ ಧ್ಯೇಯವಾಕ್ಯವಾದ "ನಮ್ಮ ಶುಶ್ರೂಷಕರು ನಮ್ಮ ಭವಿಷ್ಯ"ವಾಗಿದೆ. ವೈದ್ಯಕೀಯ ವೃತ್ತಿಯಲ್ಲಿ ಹೆಚ್ಚು-ಹೆಚ್ಚು ಕೌಶಲ್ಯ ಗಳಿಸಿಕೊಂಡರೆ ವೃತ್ತಿಯಲ್ಲಿ ಹೆಸರುಗಳಿಸುವುದಲ್ಲದೇ ಮಾನವೀಯ ಸೇವೆಯನ್ನು ಸಮಾಜ ಗುರುತಿಸುತ್ತದೆ. ಜನವರಿ 1974 ರಲ್ಲಿ ಆಧುನಿಕ ನರ್ಸಿಂಗ್‌ನ ಸಂಸ್ಥಾಪಕಿಯಾದ ಪ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮ ದಿನದ ಅಂಗವಾಗಿ ಮೇ.12 ರನ್ನು ನರ್ಸಿಂಗ್ ದಿನವನ್ನು ಆಚರಿಸಲಾಗಿದೆ.

ಕಾರ್ಯಕ್ರಮದಲ್ಲಿ ಶ್ರೀರಮಣ ಮಹರ್ಷಿ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಉಷಾ.ಎಸ್.ರವರು ಮಾತನಾಡಿದರು.

ಕಾರ್ಯಕ್ರಮದ ಶ್ರೀದುರ್ಗಾಂಬಾ ಸ್ಕೂಲ್ ಆಫ್ ನರ್ಸಿಂಗ್ ಪ್ರಾಂಶುಪಾಲೆ ಪ್ರೊ.ಅಂಬಾರವರು ಮಾತನಾಡುತ್ತಾ ಜಗತ್ತಿನಲ್ಲಿ ಆರೋಗ್ಯ ವಲಯ ವಿಸ್ತಾರಗೊಳ್ಳುತ್ತಿದ್ದು ಅದರಂತೆ ನರ್ಸಿಂಗ್ ಸೇವೆಗೂ ಬೇಡಿಕೆ ಹೆಚ್ಚಾಗುತ್ತಿದೆ ಎಂದು ಅರ್ಥಪೂರ್ಣವಾಗಿ ವಿವರಿಸಿದರು. ಕಾರ್ಯಕ್ರಮ ಮುಖ್ಯಅತಿಥಿಗಳಾಗಿ ತುಮಕೂರಿನ ಜಿಲ್ಲಾಸ್ಪತ್ರೆಯ ಶಾಂತ, ಶ್ರೀದೇವಿ ನರ್ಸಿಂಗ್ ಕಾಲೇಜಿನ ಡಾ.ಟಿ.ಎಸ್.ಭೀಮರಾಜು, ಶ್ರೀದೇವಿ ನರ್ಸಿಂಗ್ ಕಾಲೇಜಿನ ಮಾನಸಿಕ ತಜ್ಞರ ಮುಖ್ಯಸ್ಥರಾದ ಪ್ರೊ.ಟಿ.ವಿ.ರೇವಣ್ಣ, ಪ್ರೊ.ನಾರಾಯಣ್, ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿ- ವಿದ್ಯಾರ್ಥಿನಿಯರು ಭಾಗವಹಿಸಿದ್ದರು.




ತುಮಕೂರು : ಶಾಂತಿಯ ಸಂಕೇತದ ಮಹಾನ್ ಚೇತನರಾದ ಭಗವಾನ್ ಬುದ್ಧ ಪೌರ್ಣಮಿಯ ಅಂಗವಾಗಿ ಇಂದು ತುಮಕೂರು ನಗರದ ಸದಾಶಿವನಗರದಲ್ಲಿ ಅಂಬೇಡ್ಕರ್ ವಿವಿದ್ದೋದ್ದೇಶ ಸಹಕಾರ ಸಂಘ ರಿ., ಇದರ ಕಛೇರಿಯಲ್ಲಿ ಬುದ್ಧನ ಆಶಯದಂತೆ ಸರಳವಾಗಿ ಬುದ್ಧ ಪೌರ್ಣಮಿಯನ್ನು ಆಚರಿಸಲಾಯಿತು. ಬ್ಯಾಂಕಿನ ಸದಸ್ಯರಾದ ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ರಾಜ್ಯ ಉಪಾಧ್ಯಕ್ಷರಾದ ಇಂದ್ರಕುಮಾರ್ ಡಿ.ಕೆ., ಅಂಬೇಡ್ಕರ್ ವಿವಿಧೋದ್ದೇಶ ಸಹಕಾರ ಸಂಘದ ಮುಖ್ಯಸ್ಥರುಗಳಾದ ಮಂಚಲದೊರೆ ಕಂಬಯ್ಯ, ಡಿ.ಕೆ.ಇಂದ್ರ ಕುಮಾರ್, ಕಮಲಮ್ಮ, ಕಿರಣ್ ಕುಮಾರ್ ಹರ್ತಿ ಹಾಗೂ ದನಲಕ್ಷ್ಮಿ ಎಂ.ಆರ್ ಇನ್ನಿತರರು ಉಪಸ್ಥಿತರಿದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper